# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:- 20-03-2021 ರಂದು ಬೆಳಗ್ಗೆ:- 11.00 ಗಂಟೆಗೆ ಪಾಲಿಕೆಸೌಧ ವಾರ್ಡ್ ಸಂಖ್ಯೆ 128 ನಾಗರಭಾವಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020-21/21-09-2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ. ನಾಗರಾಜ್ ಸಿಂಗ್ರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಗೋವಿಂದರಾಜನಗರ ಉಪವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:-**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೋಡೆಲ್ ಅಧಿಕಾರಿ<br>ಶ್ರೀ. ನಾಗರಾಜ್ ಸಿಂಗ್ರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಗೋವಿಂದರಾಜನಗರ ಉಪವಿಭಾಗ, ಬಿ.ಬಿ.ಎಂ.ಪಿ, | 9945138444 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ಮಂಜೇಗೌಡ್ರು, ಸಹಾಯಕ ಅಭಿಯಂತರರು, ವಾರ್ಡ್ ನಂ.128 | 7019520049 |
| 3 | ಶ್ರೀ. ಯಶವಂತ್ ರಾಜ್, ARO , ChandraLayout | 9480685657 |
| 5 | ಶ್ರೀ. ಸಿ. ಕುಮಾರ್, ಕಂದಾಯ ಮೌಲ್ಯಮಾಪಕರು, ಚಂದ್ರಾಬಡಾವಣೆ. | 9480685657 |
| 7 | ಶ್ರೀ. ಕೃಷ್ಣಪ್ಪ, AE, BWSSB, ChandraLayout. | 8660271833 |
| 8 | ಶ್ರೀಮತಿ. ಸುಮ, Junior Engineer, BESCOM, ChandraLayout. | 9535569517 |
| 9 | ಶ್ರೀ. ಸಿದ್ದೇಶ್, Health Inspector, ChandraLayout. | 9480685593 |
| 10 | ಶ್ರೀ. ಲಕ್ಷ್ಮಿಪತಿ, ಕಂದಾಯ ವಸೂಲಿಗಾರರು, ಚಂದ್ರಾಬಡಾವಣೆ. | 9731962669 |
| 11 | ಶ್ರೀ. ವಿಜಯ್ ಕುಮಾರ್, ಕಿರಿಯ ಆರೋಗ್ಯ ಪರಿವೀಕ್ಷಕರು, ಚಂದ್ರಾಬಡಾವಣೆ. | 9738630005 |
| 12 | ಶ್ರೀ. ಮಹೇಶ್ ಕೆ.ಎಸ್, ವಾರ್ಡ್ 128ರ ಮಾರ್ಷಲ್ ನಾಗರಭಾವಿ | 7676936690 |
| 13 | ಶ್ರೀ. ಸಿ.ಎಂ. ರಮೇಶ್, Health Supervisor, ChandraLayout. | 9483331037 |
| 14 | ಶ್ರೀಮತಿ. ಶಾರದಮ್ಮ, ಕಂದಾಯ ಪರಿವೀಕ್ಷಕರು ವಾರ್ಡ್ ನಂ.128 | 8861784172 |

********

Scanned with CamScanner

ದಿನಾಂಕ: 20-03-2021 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತಾರೆ, ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

1. **ಬೆಸ್ಕಾಂ ಇಲಾಖೆ.**

ನಾಗರಭಾವಿ ವಾರ್ಡ್ ವ್ಯಾಪ್ತಿಯ ಕೇಬಲ್ ಕಾಮಗಾರಿಯು ಪ್ರಗತಿಯಲ್ಲಿದ್ದು, ಈ ಕುರಿತಾಗಿ ತೆಗೆದುಕೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳನ್ನು ಸಂಬಂಧಪಟ್ಟ ಅಧಿಕಾರಿಗಳು ತೆಗೆದುಕೊಂಡು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಲು ಸೂಚಿಸಿದರು.

2. **ಬೀದಿ ದೀಪ ನಿರ್ವಹಣೆ.**

ನಾಗರಭಾವಿ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಬೀದಿದೀಪಗಳನ್ನು ಸರಿಪಡಿಸಲಾಗಿದೆಂದು ಅಧಿಕಾರಿಗಳು ತಿಳಿಸಿರುತ್ತಾರೆ.

3. **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ.**

ಸದರಿ ಇಲಾಖೆಯವರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಅಗೆದ ಗುಂಡಿಗಳನ್ನು ಸರಿಪಡಿಸಿ ಸಾರ್ವಜನಿಕರ ಓಡಾಟಕ್ಕೆ ಅನುವು ಮಾಡಿಕೊಡಲು ಸೂಚಿಸಲಾಯಿತು.

4. **ಕಂದಾಯ ಇಲಾಖೆ ಬಗ್ಗೆ.**

ಕಂದಾಯ ಇಲಾಖೆ ಅಧಿಕಾರಿಗಳು ಹೇಳಿರುವಂತೆ ವೋಟರ್ ಐಡಿ ಕೆಲಸವು ಚಾಲ್ತಿಯಲ್ಲಿರುತ್ತದೆ, ಪಾಲಿಕೆಯ ಒಳಗೊಂಡಂತೆ ಆಸ್ತಿ ತೆರಿಗೆಯನ್ನು ವಸೂಲಿ ಮಾಡಲಾಗಿರುತ್ತದೆ ಮತ್ತು ಕೋವಿಡ್-19 ಕೆಲಸದಲ್ಲಿರುವ ಎಲ್ಲಾ ಬಿ.ಎಲ್.ಓಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ ಎಂದು ನೋಡೆಲ್ ಅಧಿಕಾರಿಯವರಿಗೆ ತಿಳಿಸಿದರು.

Scanned with CamScanner

ನಾಗರಭಾವಿ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಜ್ಞಾನಭಾರತಿ ಮುಖ್ಯರಸ್ತೆಯಲ್ಲಿರುವ ವಸತಿಯೇತರ ಸ್ವತ್ತುಗಳ ಕಂದಾಯ ಪಾವತಿಯ ಬಗ್ಗೆ ಅಪ್ಲಿಕೇಶನ್‌ಗಳೊಂದಿಗೆ ಸ್ಥಳದಲ್ಲಿ ಪರಿಶೀಲಿಸುವ ಸರ್ವೆ ಕಾರ್ಯವನ್ನು ಮಾಡಲಾಗಿದ್ದು ಹಾಗೂ ವಾರ್ಡಿನ ಮುಖಾಂತರ ಮತದಾರರ ಪಟ್ಟಿಯಲ್ಲಿ ಸೇರಿಸುವ ಅರ್ಜಿಗಳನ್ನು ಖುದ್ದಾಗಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಕಂದಾಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.

5. **ತೋಟಗಾರಿಗೆ ಇಲಾಖೆ ಬಗ್ಗೆ.**

ತೋಟಗಾರಿಕೆ ಇಲಾಖೆಯಲ್ಲಿ ಹಾಗೂ ಫಾರೆಸ್ಟ್ ಇಲಾಖೆಯವರು ವಾರ್ಡ್ ವ್ಯಾಪ್ತಿಯಲ್ಲಿ ಪರಿಶಿಲಿಸಿ ಮರಗಿಡಗಳನ್ನು ಸಾರ್ವಜನಿಕರ ಹಿತದೃಷ್ಠಿಯಿಂದ ಟ್ರಿಮ್ ಮಾಡಲು ಕ್ರಮಕೈಗೊಳ್ಳಲು ಸೂಚಿಸಲಾಯಿತು.

6. **ಆರೋಗ್ಯ ಇಲಾಖೆ.**

ಕೋವಿಡ್-19 ನಲ್ಲಿ ಪಾಸಿಟಿವ್ ಪ್ರಕರಣಗಳು ಹಾಗೂ ವ್ಯಾಕ್ಸಿನೇಷನ್ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿ, ಪ್ರತಿನಿತ್ಯ ಸ್ಪ್ರೇಯಿಂಗ್ ಅನ್ನು ವಾರ್ಡ್ ನಂ.128 ಪ್ರದೇಶಗಳಲ್ಲಿ ನಿರ್ವಹಿಸಲು ತಿಳಿಸಿರುತ್ತಾರೆ.

7. **ಘನತ್ಯಾಜ್ಯ ನಿರ್ವಹಣೆ**

ನಾಗರಭಾವಿ ವಾರ್ಡಿನಲ್ಲಿ ಒಟ್ಟು 03 ಕಾಂಪ್ಯಾಕ್ಟರ್‌ಗಳು ಹಾಗೂ 18 ಆಟೋ ಟಿಪ್ಪರ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಮುಂದಿನ ದಿನಗಳಲ್ಲಿ ಕಸ ವಿಂಗಡಣೆ ಕೆಲಸವನ್ನು ಮುಂದಿನ ದಿನಗಳಲ್ಲಿ ಪರಿಣಾಮಕಾರಿಯಾಗಿ ನಿರ್ವಹಿಸಲಾಗುವುದೆಂದು ಸಭೆಯಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು. ಹಿಂದಿನ ಸಭೆಯಲ್ಲಿ , ಸರಾಸರಿ ತಿಂಗಳಿಗೆ 5.00 ಟನ್‌ಗಳಷ್ಟು ಹಸಿಕಸವನ್ನು ಸಂಗ್ರಹಿಸಲಾಗುತ್ತಿದ್ದು, ಪ್ರಸ್ತುತವಾಗಿ 5.70 ಟನ್‌ಗಳಷ್ಟು ಹಸಿಕಸವನ್ನು ಸಂಗ್ರಹಿಸಲಾಗಿದೆ.

8. **ಪೋಲಿಸ್ ಇಲಾಖೆ**

ಶ್ರೀಮತಿ ರತ್ನಾ ಎನ್.ಜಿ.ಒ ಅಹ್ಮದ್ ನಗರರವರು ಅಹ್ಮದ್ ನಗರದಲ್ಲಿ ಪೋಲಿಸ್ ಗಸ್ತು ಪಡೆ ನಿಯೋಜಿಸಲು ಕೋರಿರುತ್ತಾರೆ. ಅದರಂತೆ ಸಂಬಂಧಪಟ್ಟ ಇಲಾಖೆಯವರಿಗೆ ತಿಳಿಸಲು ಕಾರ್ಯದರ್ಶಿರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂದಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

K. Muni...

ಕಾರ್ಯದರ್ಶಿ ಮತ್ತು ಸಂಚಾಲಕರು
ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ.128

ವಾರ್ಡ್ ನೋಡಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಾರ್ಡ್ ಸಂಖ್ಯೆ.128

<u>ಪ್ರತಿಯನ್ನು:-</u>

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.

Scanned with CamScanner